Akashvani : Bengaluru
National Bulletin In Kannada
10.09.2025 : 1.10 pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
10.09.2025 : 1.10 pm
*******

## ಮುಖ್ಯಾಂಶಗಳು

೧. ಭಾರತ ಮತ್ತು ಅಮೆರಿಕ ನಡುವೆ ನಿಕಟ ಬಾಂಧವ್ಯ; ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜೊತೆ ಮಾತುಕತೆಗೆ ಉತ್ಸುಕ; ಪ್ರಧಾನಿ ನರೇಂದ್ರ ಮೋದಿ

೨. ಗಲಭೆ ಗ್ರಸ್ಥ ನೇಪಾಳದಲ್ಲಿ ಶಾಂತಿ ಪುನರ್‌ಸ್ಥಾಪನೆಗೆ ಮಾತುಕತೆ ಪ್ರಗತಿಯಲ್ಲಿ

೩. ನೇಪಾಳದಲ್ಲಿ ಸಿಲುಕಿರುವ ಕನ್ನಡಿಗರು ಸುರಕ್ಷಿತ; ವಾಪಸ್ ಕರೆ ತರಲು ಮುಂದುವರೆದ ಪ್ರಯತ್ನ

೪. ಏಷ್ಯಾಕಪ್ ಟಿ-೨೦ ಕ್ರಿಕೆಟ್ ಟೂರ್ನಿ; ಇಂದು ಭಾರತ ಯುಎಇ ಮುಖಾಮುಖಿ

*><><><*><><><*

ಭಾರತ ಮತ್ತು ಅಮೆರಿಕ ನಿಕಟ ಸ್ನೇಹಿತರು ಹಾಗೂ ನೈಸರ್ಗಿಕ ಪಾಲುದಾರರು ಎಂದು ಪ್ರಧಾನಿ ನರೇಂದ್ರ ಮೋದಿ ಇಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ ಮೋದಿ ಅವರು ಎರಡೂ ರಾಷ್ಟ್ರಗಳ ನಡುವಿನ ವ್ಯಾಪಾರ ಮಾತುಕತೆಗಳು ಭಾರತ-ಅಮೆರಿಕ ಪಾಲುದಾರಿಕೆಯ ಅಪರಿಮಿತ ಸಾಮರ್ಥ್ಯವನ್ನು ಅನಾವರಣಗೊಳಿಸಲು ಸಹಕಾರಿಯಾಗಿವೆ. ಎರಡೂ ಕಡೆ ಈ ಚರ್ಚೆಗಳನ್ನು ಆದಷ್ಟು ಬೇಗ ಮುಗಿಸಲು ಕೆಲಸ ಮಾಡುತ್ತಿವೆ ಎಂದು ಅವರು ಹೇಳಿದರು. ಶೀಘ್ರದಲ್ಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾಗಲು ಎದುರು ನೋಡುತ್ತಿದ್ದೇನೆ. ಉಭಯ ರಾಷ್ಟ್ರಗಳ ಜನರಿಗೆ ಉಜ್ವಲ, ಹೆಚ್ಚು ಸಮೃದ್ಧ ಭವಿಷ್ಯವನ್ನು ಭದ್ರಪಡಿಸಿಕೊಳ್ಳಲು ಅಧ್ಯಕ್ಷ ಟ್ರಂಪ್ ಅವರೊಂದಿಗೆ ಒಟ್ಟಾಗಿ ಕೆಲಸ ಮಾಡುವ ಭರವಸೆಯನ್ನು ಪ್ರಧಾನಿ ವ್ಯಕ್ತಪಡಿಸಿದ್ದಾರೆ.

*><><><*><><><*

ಭಾರತ-ಅಮೆರಿಕ ನಡುವಿನ ವ್ಯಾಪಾರ ಅಡೆತಡೆಗಳನ್ನು ಪರಿಹರಿಸಲು ಮಾತುಕತೆ ಮುಂದುವರಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಯಾದ ಟ್ರೂತ್ ಸೋಷಿಯಲ್ ಪೋಸ್ಟ್‌ನಲ್ಲಿ ಈ ವಿಷಯ ತಿಳಿಸಿರುವ ಅವರು,

ಟ್ರಂಪ್ ಮುಂಬರುವ ವಾರಗಳಲ್ಲಿ ನನ್ನ ಆತ್ಮೀಯ ಸ್ನೇಹಿತ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತನಾಡಲು ಎದುರು ನೋಡುತ್ತಿದ್ದೇನೆ. ಎರಡೂ ಮಹಾನ್ ದೇಶಗಳಿಗೆ ಯಶಸ್ವಿ ತೀರ್ಮಾನಕ್ಕೆ ಬರಲು ಯಾವುದೇ ತೊಂದರೆ ಇಲ್ಲ ಎಂದು ಆಶಾವಾದ ವ್ಯಕ್ತಪಡಿಸಿದ್ದಾರೆ. ರಷ್ಯಾದ ತೈಲ ಖರೀದಿಯ ಮೇಲೆ ಹೆಚ್ಚುವರಿಯಾಗಿ ಶೇಕಡಾ ೨೫ ರಷ್ಟು ದಂಡ ಸೇರಿದಂತೆ ಭಾರತೀಯ ಸರಕುಗಳ ಮೇಲೆ ಅಮೆರಿಕ ಶೇಕಡಾ ೫೦ ರಷ್ಟು ಸುಂಕ ವಿಧಿಸಿದ ವಾರಗಳ ನಂತರ ಅವರು ಈ ಆಶಯ  ವ್ಯಕ್ತಪಡಿಸಿದ್ದಾರೆ. ಈ ವಾರದ ಆರಂಭದಲ್ಲಿ, ಅಧ್ಯಕ್ಷ ಟ್ರಂಪ್ ಭಾರತ-ಅಮೆರಿಕ ಸಂಬಂಧಗಳನ್ನು "ಬಹಳ ವಿಶೇಷ ಸಂಬಂಧ" ಎಂದು ಕರೆದರು ಅವರು ಮತ್ತು ಪ್ರಧಾನಿ ಮೋದಿ ಯಾವಾಗಲೂ ಸ್ನೇಹಿತರಾಗಿರುತ್ತಾರೆ ಎಂದು ದೃಢಪಡಿಸಿದರು, "ಚಿಂತಿಸಲು ಏನೂ ಇಲ್ಲ" ಎಂದು ಪ್ರತಿಪಾದಿಸಿದರು.

*><><><*><><><*

ಗಲಭೆ ಗ್ರಸ್ತ ನೇಪಾಳದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ಪ್ರಯತ್ನಗಳು ಪ್ರಗತಿಯಲ್ಲಿವೆ. ನೇಪಾಳಿ ಸೇನೆಯ ಸಮನ್ವಯದೊಂದಿಗೆ ಮಧ್ಯರಾತ್ರಿ ಜಂಗಿ ಅಡ್ಡಾದ ಮಿಲಿಟರಿ ಪ್ರಧಾನ ಕಚೇರಿಯಲ್ಲಿ ಜನರಲ್ ಝಡ್ ಪ್ರತಿನಿಧಿಗಳೊಂದಿಗೆ ಶಾಂತಿ ಸ್ಥಾಪನೆ ಕುರಿತು ಚರ್ಚೆ ನಡೆಯಿತು. ವಿವಿಧ ಗುಂಪುಗಳ ಜನರಲ್ ಝಡ್ ಪ್ರತಿನಿಧಿಗಳು ತಮ್ಮ ಸಮಸ್ಯೆಗಳನ್ನು ಮಂಡಿಸಲು ತಡರಾತ್ರಿ ಮಿಲಿಟರಿ ನೆಲೆಯಲ್ಲಿ ಸೇನಾ ಮುಖ್ಯಸ್ಥ ಅಶೋಕ್ ರಾಜ್ ಸಿಗ್ಡೆಲ್ ಅವರನ್ನು ಭೇಟಿಯಾದರು. ನೇಪಾಳಿ ಸೇನಾ ಹಿರಿಯ ಅಧಿಕಾರಿಯೊಬ್ಬರು ಇದನ್ನು ಔಪಚಾರಿಕ ಮಾತುಕತೆಗಿಂತ ಹೆಚ್ಚಾಗಿ ಗೆಂಜಿಯವರ ಅಭಿಪ್ರಾಯಗಳನ್ನು ಅರ್ಥಮಾಡಿಕೊಳ್ಳುವ ಆರಂಭಿಕ ಪ್ರಯತ್ನ ಎಂದು ವ್ಯಾಖ್ಯಾನಿಸಿದ್ದಾರೆ. ಏತನ್ಮಧ್ಯೆ, ದೇಶದಲ್ಲಿ ಪ್ರಸ್ತುತ ಭದ್ರತಾ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ನೇಪಾಳ ಸೇನೆಯು ವಿಶೇಷ ಭದ್ರತಾ ಕಾರ್ಯ ವಿಧಾನಗಳನ್ನು ಪ್ರಾರಂಭಿಸಿದೆ. ಲೂಟಿ, ಬೆಂಕಿ ಹಚ್ಚುವಿಕೆ ಮತ್ತು ಅಸ್ತವ್ಯಸ್ತವಾಗಿರುವ ಚಟುವಟಿಕೆಗಳನ್ನು ನಿಯಂತ್ರಿಸುವಲ್ಲಿ ಸಕ್ರಿಯವಾಗಿ ಸಹಕರಿಸುವಂತೆ ಸೇನೆಯು ಸಮುದಾಯವನ್ನು ಕೋರಿದೆ. ಕಠ್ಮಂಡುವಿನ ಬನೇಶ್ವರ್‌ನಲ್ಲಿರುವ ರಾಷ್ಟ್ರೀಯ ಬ್ಯಾಂಕ್ ದರೋಡೆಯಲ್ಲಿ ಭಾಗಿಯಾಗಿರುವ ಐವರನ್ನು ಮತ್ತು ಪರಿಸ್ಥಿತಿಯ ಲಾಭವನ್ನು ಪಡೆದುಕೊಂಡು ಕಠ್ಮಂಡು ಮತ್ತು ಭಕ್ತಪುರದ ವಿವಿಧ ಪ್ರದೇಶಗಳಿಂದ ಲೂಟಿಯಲ್ಲಿ ಭಾಗಿಯಾದ ಆರೋಪದ ಮೇರೆಗೆ ೨೧ ಜನರನ್ನು ಬಂಧಿಸಲಾಗಿದೆ.

*><><><*><><><*

ಪರಿಸ್ಥಿತಿ ತಿಳಿಯಾಗುವವರೆಗೆ ನೇಪಾಳಕ್ಕೆ ಪ್ರಯಾಣ ಮಾಡದಂತೆ ಕೇಂದ್ರ ಸರ್ಕಾರ ಭಾರತೀಯ ನಾಗರಿಕರಿಗೆ ಸೂಚಿಸಿದೆ. ನೇಪಾಳದಲ್ಲಿರುವ ಭಾರತೀಯ ನಾಗರಿಕರು ತಮ್ಮ ಪ್ರಸ್ತುತ ವಾಸಸ್ಥಳಗಳಲ್ಲಿ ಆಶ್ರಯ ಪಡೆಯುವಂತೆ, ಸಾರ್ವಜನಿಕ ಪ್ರದೇಶಗಳಿಗೆ ತೆರಳಬಾರದು ಹಾಗೂ ಎಲ್ಲಾ

ರೀತಿಯ ಎಚ್ಚರಿಕೆ ವಹಿಸುವಂತೆ ಸರ್ಕಾರ ಸಲಹೆ ನೀಡಿದೆ. ನೇಪಾಳ ಅಧಿಕಾರಿಗಳು ಮತ್ತು ಕತ್ಮಂಡುವಿನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಸ್ಥಳೀಯ ಸುರಕ್ಷತಾ ಸಲಹೆಗಳನ್ನು ಅನುಸರಿಸುವಂತೆಯೂ ಸರ್ಕಾರ ಸೂಚಿಸಿದೆ. ಯಾವುದೇ ಸಹಾಯದ ಅಗತ್ಯವಿದ್ದರೆ, ಕತ್ಮಂಡುವಿನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಸಹಾಯವಾಣಿ ಸಂಖ್ಯೆ +೯೭೭ - ೯೮೦ ೮೬೦೨೮೮೧ ಮತ್ತು +೯೭೭ - ೯೮೧ ೦೩೨ ೬೧೩೪ ಅನ್ನು ಸಂಪರ್ಕಿಸುವಂತೆ ಸೂಚಿಸಿದೆ.

*><><*><><*

ನೇಪಾಳದಲ್ಲಿ ಸಿಲುಕಿರುವ ಕನ್ನಡಿಗರು ಸುರಕ್ಷಿತರಾಗಿದ್ದಾರೆ. ಮುಖ್ಯ ಕಾರ್ಯದರ್ಶಿ ಹಾಗೂ ಇತರ ಉನ್ನತ ಅಧಿಕಾರಿಗಳು ಕನ್ನಡಿಗರನ್ನು ಕರೆ ತರಲು ಪ್ರಯತ್ನ ಮುಂದುವರಿಸಿದ್ದಾರೆ ಎಂದು ಮುಖ್ಯಮಂತ್ರಿ ಸಚಿವಾಲಯ ತಿಳಿಸಿದೆ. ನೇಪಾಳದ ಕತ್ಮಂಡುವಿನಲ್ಲಿ ೩೯ ಕನ್ನಡಿಗರು ಸಿಲುಕಿದ್ದು, ಅವರನ್ನು ಸುರಕ್ಷಿತವಾಗಿ ಕರೆತರಲು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸುತ್ತಿರುವುದಾಗಿ ಮಾಹಿತಿ ನೀಡಿದೆ.

*><><*><><*

ಅಕ್ರಮ ಆನ್‌ಲೈನ್ ಹಾಗೂ ಆಫ್‌ಲೈನ್ ಬೆಟ್ಟಿಂಗ್ ಮತ್ತು ಅಕ್ರಮ ಹಣ ವರ್ಗಾವಣೆ ಆರೋಪದ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ಇದುವರೆಗೂ ಚಿತ್ರದುರ್ಗ ಶಾಸಕ ವೀರೇಂದ್ರ ಪಪ್ಪಿಗೆ ಸೇರಿದ ಕೆಜಿಗಟ್ಟಲೇ ಚಿನ್ನ, ಬೆಳ್ಳಿ, ಐಷಾರಾಮಿ ಕಾರುಗಳು ಸೇರಿ ೧೦೦ ಕೋಟಿ ರೂಪಾಯಿಗಿಂತ ಅಧಿಕ ಆಸ್ತಿಯನ್ನು ಜಪ್ತಿ ಮಾಡಿದೆ. ಇಡಿ ಅಧಿಕಾರಿಗಳು ಚಳ್ಳಕೆರೆಯಲ್ಲಿ ಕೆ.ಸಿ. ವೀರೇಂದ್ರ ಹಾಗೂ ಸಂಬಂಧಿಕರ ಮನೆ ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿದ್ದರು.

*><><*><><*

ಉಪರಾಷ್ಟ್ರಪತಿಯಾಗಿ ಸಿ ಪಿ ರಾಧಾಕೃಷ್ಣನ್ ಅವರು ಆಯ್ಕೆಯಾಗಿದ್ದಾರೆ. ಈ ಮೂಲಕ, ದೇಶದ ಎರಡನೇ ಅತ್ಯುನ್ನತ ಸಾಂವಿಧಾನಿಕ ಹುದ್ದೆಯನ್ನು ಅವರು ಅಲಂಕರಿಸಲಿದ್ದಾರೆ. ತಮ್ಮ ಆಯ್ಕೆಯನ್ನು ರಾಷ್ಟ್ರೀಯತಾವಾದಿ ಸಿದ್ಧಾಂತದ ಗೆಲುವು ಎಂದು ನೂತನ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಬಣ್ಣಿಸಿದ್ದಾರೆ. ೨೦೪೭ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಶ್ರಮಿಸುವುದಾಗಿ ತಿಳಿಸಿದ್ದಾರೆ.

**ಧ್ವನಿ : ಉಪರಾಷ್ಟ್ರಪತಿ, ಸಿ.ಪಿ.ರಾಧಾಕೃಷ್ಣನ್ ( 19 ಸೆಕೆಂಡುಗಳು)**

ಉಪರಾಷ್ಟ್ರಪತಿ ಚುನಾವಣೆಯಲ್ಲಿ ೧೫೨ ಮತಗಳ ಅಂತರದಿಂದ ಗೆದ್ದ, ಸಿ.ಪಿ.ರಾಧಾಕೃಷ್ಣನ್ ೪೫೨ ಮತಗಳನ್ನು ಪಡೆದರೆ, ಅವರ ಪ್ರತಿಸ್ಪರ್ಧಿ ಬಿ ಸುದರ್ಶನ್ ರೆಡ್ಡಿ ೩೦೦ ಮತಗಳನ್ನು ಗಳಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು, ಸಿ.ಪಿ.ರಾಧಾಕೃಷ್ಣನ್

ಅವರನ್ನು ಅಭಿನಂದಿಸಿದ್ದಾರೆ.  ಸಾರ್ವಜನಿಕ ಜೀವನದಲ್ಲಿ ಅವರ ದಶಕಗಳ ಶ್ರೀಮಂತ ಅನುಭವವು ರಾಷ್ಟ್ರದ ಪ್ರಗತಿಗೆ ಗಣನೀಯ ಕೊಡುಗೆ ನೀಡಲಿದೆ. ಅವರ ಆಯ್ಕೆ  ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸುತ್ತದೆ ಮತ್ತು ಸಂಸದೀಯ ಸಂವಾದವನ್ನು ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ. ಸೋತ ಅಭ್ಯರ್ಥಿ ಸುದರ್ಶನ್ ರೆಡ್ಡಿ ಅವರು ಫಲಿತಾಂಶವನ್ನು ವಿನಮ್ರವಾಗಿ ಸ್ವೀಕರಿಸುವುದಾಗಿ ಮತ್ತು ಸಿ.ಪಿ.ರಾಧಾಕೃಷ್ಣನ್ ಅವರನ್ನು ಅಭಿನಂದಿಸುವುದಾಗಿ ತಿಳಿಸಿದ್ದಾರೆ.

*><><><*><><><*

ಸ್ವಾತಂತ್ರ್ಯನಂತರ ಮಿಜೋರಾಮ್ ಗೆ ಮೊದಲ ಬಾರಿಗೆ ನೂತನ ರೈಲು ಸಂಪರ್ಕ ಸಾಧ್ಯವಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ಭೈರಾಬಿ-ಸೈರಾಂಗ್ ನಡುವಿನ ೫೨.೩೮ ಕಿಲೋ ಮೀಟರ್ ಹೊಸ ರೈಲು ಮಾರ್ಗ ಸಾರ್ವಜನಿಕ ಸೇವೆಗೆ ಸಜ್ಜಾಗಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು, ಸಧ್ಯದಲ್ಲಿಯೇ ರೈಲು ಸೇವೆಯನ್ನು ಲೋಕಾರ್ಪಣೆ ಮಾಡಲಿದ್ದಾರೆ ಎಂದು ಹುಬ್ಬಳ್ಳಿಯ ನೈರುತ್ಯ ರೈಲ್ವೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಬಿ.ರಾಧಾರಾಣಿ ಆಕಾಶವಾಣಿಗೆ ತಿಳಿಸಿದ್ದಾರೆ.

*><><><*><><><*

ಪ್ರವಾಹ ಸಂತ್ರಸ್ಥ ಪಂಜಾಬ್‌ಗೆ ೧ ಸಾವಿರದ ೬೦೦ ಕೋಟಿ ರೂಪಾಯಿಗಳ ಆರ್ಥಿಕ ಸಹಾಯವನ್ನು ಪ್ರಧಾನಿ ನರೇಂದ್ರ ಮೋದಿ  ಘೋಷಿಸಿದ್ದಾರೆ. ಎಸ್‌ಡಿಆರ್‌ಎಫ್ ಮತ್ತು ಪಿಎಂ ಕಿಸಾನ್ ಸಮ್ಮಾನ್ ನಿಧಿಯ ಎರಡನೇ ಕಂತಿನ ಮುಂಗಡ ಬಿಡುಗಡೆ ಮಾಡುವುದಾಗಿ ಅವರು ತಿಳಿಸಿದ್ದಾರೆ. ಪ್ರವಾಹದಿಂದ ಮೃತಪಟ್ಟವರ ಹತ್ತಿರದ ಸಂಬಂಧಿಕರಿಗೆ ೨ ಲಕ್ಷ ರೂಪಾಯಿಗಳ ಪರಿಹಾರ ಮತ್ತು ಪ್ರವಾಹ ಹಾಗೂ ನೈಸರ್ಗಿಕ ವಿಕೋಪದಲ್ಲಿ ಗಂಭೀರವಾಗಿ ಗಾಯಗೊಂಡವರಿಗೆ ೫೦ ಸಾವಿರ  ರೂಪಾಯಿಗಳ ನೆರವು ನೀಡುವುದಾಗಿ ತಿಳಿಸಿದ್ದಾರೆ. ಈ ಪ್ರವಾಹದಿಂದಾಗಿ ಅನಾಥರಾದ ಮಕ್ಕಳಿಗೆ ಪಿಎಂ ಕೇರ್ಸ್ ಫಾರ್ ಚಿಲ್ಡ್ರನ್ ಯೋಜನೆಯಡಿಯಲ್ಲಿ ಸಮಗ್ರ ಬೆಂಬಲವನ್ನು ನೀಡಲಾಗುವುದು ಎಂದು ಅವರು ಹೇಳಿದ್ದಾರೆ.

*><><><*><><><*

ಅಬುಧಾಬಿಯಲ್ಲಿ ನಿನ್ನೆ ನಡೆದ, ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯ ಉದ್ಘಾಟನಾ ಪಂದ್ಯದಲ್ಲಿ, ಅಫ್ಘಾನಿಸ್ತಾನ ತಂಡವು ಹಾಂಗ್ ಕಾಂಗ್ ವಿರುದ್ಧ ೯೪ ರನ್‌ಗಳ ಬೃಹತ್ ಗೆಲುವು ಸಾಧಿಸಿದೆ. ಭಾರತ ತಂಡವು ಇಂದು ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಆತಿಥೇಯ ಯುಎಇ ವಿರುದ್ಧ ಗ್ರೂಪ್ ಎ ನಲ್ಲಿ ಮುಖಾಮುಖಿಯಾಗಲಿವೆ. ಈ  ಮೂಲಕ ಟೂರ್ನಿಯಲ್ಲಿ ಭಾರತ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ.

*><><><*><><><*

ದೋಹಾದಲ್ಲಿ ನಡೆದ ಎಎಫ್‌ಸಿ ಯು-೨೩ ಏಷ್ಯನ್ ಕಪ್ ೨೦೨೬ ಅರ್ಹತಾ ಪಂದ್ಯಗಳ ಫುಟ್ಬಾಲ್ ಟೂರ್ನಿಯಲ್ಲಿ ಬ್ರೂನಿ ತಂಡವನ್ನು ೬-೦ ಅಂತರದಿಂದ ಸೋಲಿಸಿದ ಭಾರತ ತನ್ನ ಅಭಿಯಾನವನ್ನು ಪೂರ್ಣಗೊಳಿಸಿತು. ಮಿಡ್‌ಫೀಲ್ಡರ್ ವಿಬಿನ್ ಮೋಹನನ್ ಅದ್ಭುತ ಹ್ಯಾಟ್ರಿಕ್ ಗಳಿಸಿದರೆ, ಆಯುಷ್ ಛೆಟ್ರಿ ಒಂದು ಮತ್ತು ಮೊಹಮ್ಮದ್ ಐಮೆನ್ ಪಂದ್ಯದ ಕೊನೆಯಲ್ಲಿ ಎರಡು ಗೋಲು ಗಳಿಸಿದರು.

*><><><*><><><*